# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 661 |
| 2 | ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ( ನಾಮನಿರ್ದೇಶನ ಹೊಂದಿದವರು) |
| 3 | ಉತ್ತರಿಸುವ ದಿನಾಂಕ | : | 17.12.2021 |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನಾ ಸಚಿವರು. |

******

| ಪ್ರಶ್ನೆ | | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಬುಡಕಟ್ಟು ಮತ್ತು ಅರಣ್ಯ ವಾಸಿ ಜನರು ವಾಸವಿರುವ ಪ್ರದೇಶದಲ್ಲಿ ದೇವಾಲಯಗಳಿಗೂ ಶಾಸಕರ ಅನುದಾನ ಸರ್ಕಾರವು ಅನುಮತಿ? ನೀಡುವುದೆ; (ವಿವರಿಸುವುದು) | ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಪರಿಷ್ಕೃತ ಮಾರ್ಗಸೂಚಿ-2014ರಲ್ಲಿ "ಧಾರ್ಮಿಕ ಸ್ಥಳಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು", ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 211 ಯೋವಿವಿ 2017, ದಿನಾಂಕ:02.03.2018 ರಲ್ಲಿ ವಾರ್ಷಿಕ ರೂ.5.00 ಲಕ್ಷಗಳನ್ನು ಉಪಯೋಗಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. |

**ಸಂಖ್ಯೆ:** ಪಿಡಿಎಸ್ 143 ಕೆಎಲ್ಎಸ್ 2021

(ಮುನಿರತ್ನ)
ಸಚಿವರು
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ

ಕರ್ನಾಟಕ ಸರ್ಕಾರ

ಸಂಖ್ಯೆ: ಯೋಇ 211 ಯೋವಿವಿ 2017

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 2.3.2018

**ಅಧಿಕೃತ ಜ್ಞಾಪನ**

ವಿಷಯ: ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಧಾರ್ಮಿಕ ಸ್ಥಳಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ- ಮುಂದುವರೆದ ಮಾರ್ಗಸೂಚಿಗಳು

ಉಲ್ಲೇಖ:
1. ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 73 ಯೋವಿವಿ 2014, ದಿನಾಂಕ: 11.03.2015
2. ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 73 ಯೋವಿವಿ 2014, ದಿನಾಂಕ: 31.03.2015
3. ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 176 ಯೋವಿವಿ 2015, ದಿನಾಂಕ: 18.01.2016
4. ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 176 ಯೋವಿವಿ 2015, ದಿನಾಂಕ: 28.07.2016
5. ಅಧಿಕೃತ ಜ್ಞಾಪನ ಸಂಖ್ಯೆ: ಯೋಇ 176 ಯೋವಿವಿ 2015, ದಿನಾಂಕ: 23.11.2016.

* * *

ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಧಾರ್ಮಿಕ ಸ್ಥಳಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕಾಲಕಾಲಕ್ಕೆ ಸರ್ಕಾರದಿಂದ ಉಲ್ಲೇಖಿತ ಅಧಿಕೃತ ಜ್ಞಾಪನಗಳ ಮೂಲಕ ಮಾರ್ಗಸೂಚಿ/ಸ್ಪಷ್ಟೀಕರಣಗಳನ್ನು ನೀಡಲಾಗಿರುತ್ತದೆ.

ಮಾನ್ಯ ಶಾಸಕರು ಗುರುತಿಸಿರುವ ಮಂದಿರ, ಮಸೀದಿ ಹಾಗೂ ಪ್ರಾರ್ಥನಾ ಮಂದಿರಗಳ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಪ್ರತಿ ಕಾಮಗಾರಿಗಳಿಗೆ ಅಂದಾಜು ಮೊತ್ತವು ರೂ.5.00 ಲಕ್ಷಗಳು ಮತ್ತು ರೂ.5.00 ಲಕ್ಷಗಳಿಗೆ ಕಡಿಮೆ ಇರತಕ್ಕದ್ದೆಂದೂ, ಉಲ್ಲೇಖಿತ ಕ್ರಸಂ. 05 ರ ಅಧಿಕೃತ ಜ್ಞಾಪನದಲ್ಲಿ ತಿಳಿಸಲಾಗಿದೆ.

ಮುಂದುವರೆದು, ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂದಿರ, ಮಸೀದಿ ಪ್ರಾರ್ಥನಾ ಮಂದಿಗಳ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ರೂ.5.00 ಲಕ್ಷಗಳಿಗೆ ಆರ್ಥಿಕ ವರ್ಷಗಳಿಗೆ ಅಥವಾ ಜೀವಿತ ಅವಧಿಗೆ ಸೀಮಿತಗೊಳಿಸಿ ಮಂಜೂರು ಮಾಡಬಹುದೇ? ಎಂಬ ಬಗ್ಗೆ

. . .2

ಸ್ಪಷ್ಟೀಕರಣ ನೀಡುವಂತೆ ಕೋರಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂದಿರ, ಮಸೀದಿ ಹಾಗೂ ಪ್ರಾರ್ಥನಾ ಮಂದಿರಗಳ ಅಭಿವೃದ್ಧಿ ಕಾಮಗಾರಿಗಳಿಗೆ ವಾರ್ಷಿಕ ರೂ. 5.00 ಲಕ್ಷಗಳ ಮಿತಿಯಲ್ಲಿ ಅನುದಾನವನ್ನು ನೀಡಬಹುದು ಎಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಫೀ ಅಹಮದ್. ಎಂ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ(1&2)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ

213

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ರಾಜ್ಯ ಪತ್ರದಲ್ಲಿ ಪ್ರಕಟಿಸಲು ಮತ್ತು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಗೆ 1000 ಪ್ರತಿಗಳನ್ನು ಪೂರೈಸಲು ಪ್ರತಿಯನ್ನು:

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು
2. ವಿಧಾನಸಭೆ/ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳು
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ
5. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
7. ಮಾನ್ಯ ಸಚಿವರುಗಳ ಆಪ್ತ ಕಾರ್ಯದರ್ಶಿಗಳು
8. ಎಲ್ಲಾ ಜಿಲ್ಲಾಧಿಕಾರಿಗಳು
9. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ
12. ಶಾಖಾಧಿಕಾರಿ, ಸ್ಕೀಮರ ಶಾಖೆ, ಯೋಜನಾ ಇಲಾಖೆ
13. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು. (ಕಾಂಪೆಂಡಿಯಮ್‌ಗೋಸ್ಕರ)